



ಅರುಣ ಪಿ. ಭಟ್ಟ

## ವಾರಭವಿಷ್ಯ: 06.04.2023ರಿಂದ 12.04.2023ರವರೆಗೆ




ಈ ವಾರ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ಮುಖ್ಯವಾಗಿ ಸಮಯದ ಕೊರತೆ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ವಾರದ ಅಂತ್ಯಕ್ಕೆ ಸರಿಯುತ್ತಾ ನಿಮ್ಮ ಆರ್ಥಿಕ ಸ್ಥಿತಿ ಅತ್ಯುತ್ತಮವಾಗಿರುತ್ತದೆ. ಶುಭದಿನ 09. ಶ್ರೀ ದುರ್ಗಾಪಾರಾಯಣ ಮಾಡಿರಿ




ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಆಹಾರ, ನೀರಿನ ಸೇವನೆಯಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಉದ್ಯೋಗ ಸ್ಥಳದಲ್ಲಿ ಒತ್ತಡದ ಸನ್ನಿವೇಶ ಎದುರಾಗಬಹುದು. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿ ಹೇಳುವ ಕೆಲವು ವಿಚಾರಗಳನ್ನು ಪೂರ್ತಿ ಮಾಡಲು ಹೆಚ್ಚು ಸಮಯ ಮೀಸಲಿಡುತ್ತೀರಿ. ಸಂಗಾತಿ ಜೊತೆಗೂಡಿ ಹಲವು ಕೆಲಸಗಳನ್ನು ಪೂರ್ಣಗೊಳಿಸಲಿದ್ದೀರಿ. ಶುಭದಿನ 08. ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಶುರುವಿನಲ್ಲಿ ಗ್ರಹಗತಿಗಳು ಉತ್ತಮವಾಗಿ ಇರುವುದರಿಂದ ನಿಮಗೆ ದೊರೆಯುವ ಅವಕಾಶಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ನೀವು ಹಾಕುವ ಶ್ರಮಕ್ಕೆ ಅದ್ಭುತವಾದ ಯಶಸ್ಸು ದೊರೆಯಲಿದೆ. ಭೂವ್ಯವಹಾರದಲ್ಲಿ ಉತ್ತಮ ಅವಕಾಶಗಳು ದೊರೆಯಲಿವೆ. ಉನ್ನತ ಶಿಕ್ಷಣದಲ್ಲೂ ಉತ್ತಮ ಬೆಳವಣಿಗೆ ಇದೆ. ಶುಭದಿನ 09. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ವೈಯಕ್ತಿಕ ಹಾಗೂ ವೃತ್ತಿಪರ ಜೀವನದಲ್ಲಿ ಕೆಲವು ಬಿಕ್ಕಟ್ಟು ಹಾಗೂ ಸಮಸ್ಯೆಗಳು ಎದುರಾಗುತ್ತವೆ. ಕೌಟುಂಬಿಕವಾಗಿ ಸಂತೋಷ, ಸಮಾಧಾನ ಇರುತ್ತದೆ. ವಾರದ ಅಂತ್ಯಕ್ಕೆ ಆರೋಗ್ಯ ಅತ್ಯುತ್ತಮವಾಗುತ್ತದೆ. ಸಂಬಂಧಗಳು ಸಾಮಾನ್ಯವಾಗಿ ಕಾಣಲು ಆರಂಭಿಸುತ್ತದೆ. ಉದ್ಯೋಗ ಸ್ಥಳದಲ್ಲಿ ಹಿರಿಯ ಅಧಿಕಾರಿಗಳಿಂದ ಸಮಸ್ಯೆ ಎದುರಾಗುತ್ತದೆ. ಶುಭದಿನ 11. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ವಾರದ ಆರಂಭವು ಬಹಳ ಸಂತೋಷವಾಗಿರುತ್ತದೆ. ಒಂದು ಕಡೆ ಆದಾಯ ಹೆಚ್ಚಿಸಿಕೊಳ್ಳುವುದಕ್ಕೆ ಉತ್ತಮ ಅವಕಾಶಗಳು ದೊರೆಯಲಿವೆ. ಇನ್ನೊಂದು ಕಡೆ ಮನೆಯ ಬಗ್ಗೆ ಸೂಕ್ತವಾದ ತೀರ್ಮಾನ ಕೈಗೊಳ್ಳುತ್ತೀರಿ. ಇದರಿಂದ ನಿಮ್ಮ ಆತ್ಮವಿಶ್ವಾಸ ಮತ್ತಷ್ಟು ಹೆಚ್ಚಾಗಲಿದೆ. ವಾರದ ಮಧ್ಯ ಭಾಗದಲ್ಲಿ ನಿದ್ರೆಯ ವಿಚಾರದಲ್ಲಿ ತೊಂದರೆ ಎದುರಾಗಲಿದೆ. ಶುಭದಿನ 12. ಸೌಂದರ್ಯಲಹರಿ ಪಠಿಸಿರಿ.




ವ್ಯಾಪಾರ ವ್ಯವಹಾರ ಮಾಡುತ್ತಿರುವವರು ಅದರ ಉನ್ನತಿಗೆ ಹೆಚ್ಚು ಶ್ರಮ ಹಾಕಲಿದ್ದೀರಿ. ಇದೇ ವೇಳೆ ಸಣ್ಣ ಪುಟ್ಟ ವರ್ತಕರ ಜತೆಗೆ ಸಂಪರ್ಕ ಸಾಧಿಸಲಿದ್ದೀರಿ. ಈ ಅವಧಿಯಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಜತೆಗೆ ಯಾವುದೇ ಚಿಂತೆ ಇರುವುದಿಲ್ಲ. ಗ್ರಹಗತಿಗಳು ಶುಭ ದೃಷ್ಟಿ ಬೀರುವ ಸಮಯ ಇದು. ಆರೋಗ್ಯ ಅತ್ಯುತ್ತಮವಾಗಿರುತ್ತದೆ. ಶುಭದಿನ 10. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಈ ಅವಧಿಯಲ್ಲಿ ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆಗಳಿವೆ. ಸಾಮಾಜಿಕ ಸ್ಥಾನಮಾನ ಹೆಚ್ಚಳ ಆಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ವಿಶ್ವಾಸ ಹೆಚ್ಚಾಗುತ್ತದೆ. ಮನರಂಜನೆ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದೀರಿ. ಶುಭದಿನ 09. ನವಗ್ರಹ ಸ್ತೋತ್ರ ಪಠಿಸಿರಿ.




ಸಾಮಾಜಿಕ ರಾಜಕೀಯ ಜೀವನದಲ್ಲಿ ನಿಮ್ಮ ಪ್ರಭಾವ ಅಷ್ಟಾಗಿ ಕೆಲಸಕ್ಕೆ ಬರುತ್ತಿಲ್ಲ ಎಂಬ ಆತಂಕ ಎದುರಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ನಿಂದನೆಗಳನ್ನು ಮಾಡುವ ಸಾಧ್ಯತೆ ಇದೆ. ಹತ್ತಿರದ ಪ್ರದೇಶಗಳಿಗೆ ಪ್ರಯಾಣ ಮಾಡಲಿದ್ದೀರಿ. ನಿಮ್ಮ ವಿಶ್ವಾಸಾರ್ಹತೆ, ಪ್ರತಿಷ್ಠೆ ಕಾಯ್ದುಕೊಳ್ಳುವಲ್ಲಿ ಸಫಲರಾಗುತ್ತೀರಿ. ಆರೋಗ್ಯ ಉತ್ತಮವಾಗಿ ಇರಲಿದೆ. ಶುಭದಿನ 11. ಶನಿ ಸ್ತೋತ್ರ ಪಠಣ ಮಾಡಿರಿ.




ಸಾರ್ವಜನಿಕ ಸಂಪರ್ಕ ಹೆಚ್ಚು ಮಾಡಿಕೊಳ್ಳಲು ವಾರದ ಶುರುವಿನಿಂದಲೇ ಹೆಚ್ಚು ಶ್ರಮ ಹಾಕುತ್ತೀರಿ. ಈ ಪ್ರಯತ್ನದಿಂದ ನಿಮಗೆ ಲಾಭ ಆಗುತ್ತದೆ. ಉದ್ಯಮ ನಡೆಸುತ್ತಿರುವವರು ಈಗ ನೀಡುತ್ತಿರುವ ಸೇವೆಗಳ ಜತೆಗೆ ಇನ್ನಷ್ಟು ಸೇರ್ಪಡೆ ಮಾಡಲಿದ್ದೀರಿ. ವೈವಾಹಿಕ ಜೀವನವು ಸಾಮಾನ್ಯವಾಗಿರುತ್ತದೆ. ಕುಟುಂಬ ಜೀವನಕ್ಕೆ ಹೆಚ್ಚಿನ ಸಮಯ ಇಡಬೇಕಾಗುತ್ತದೆ. ಶುಭದಿನ 07. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ವಾರದ ಆರಂಭದಲ್ಲಿ ವ್ಯಾಪಾರ, ಉದ್ಯಮ ಹಾಗೂ ವ್ಯವಹಾರದ ಬಗ್ಗೆ ಗಮನ ಹೆಚ್ಚು ನೀಡಬೇಕಾಗುತ್ತದೆ. ಉತ್ಪಾದನಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಣಕಾಸಿನ ಕೊರತೆ ಹಾಗೂ ಕಚ್ಚಾ ವಸ್ತುಗಳ ಕೊರತೆ ಕಾಡಲಿದೆ. ಮಲಬದ್ಧತೆ ಹಾಗೂ ಇತರ ಅನಾರೋಗ್ಯ ಸಮಸ್ಯೆಗಳು ಈ ಅವಧಿಯಲ್ಲಿ ಕಾಡಬಹುದು. ವಾರದ ಅಂತ್ಯಕ್ಕೆ ಅನಾರೋಗ್ಯ ಕಾಡಬಹುದು. ಶುಭದಿನ 12. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಹಣದ ಸದುಪಯೋಗಕ್ಕೆ ಯೋಜನೆ ರೂಪಿಸಲಿದ್ದೀರಿ. ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಸಾಧ್ಯತೆಗಳಿವೆ. ಶುಭದಿನ 11. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ನಿಮ್ಮ ಕೆಲಸಗಳು ಸರಿಯಾಗಿ ಇವೆಯೇ ಎಂದು ಪರಿಶೀಲನೆ ಮಾಡಲಿದ್ದೀರಿ. ನೀವು ಖರ್ಚು ಮಾಡಿದ ಹಣಕ್ಕೆ ತಕ್ಕ ಪ್ರತಿಫಲ ಇಲ್ಲ ಎಂದು ಸ್ವಲ್ಪ ಮಟ್ಟಿಗೆ ಬೇಸರ ಆಗುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ವೈಯಕ್ತಿಕ ಹಾಗೂ ಕೌಟುಂಬಿಕ ಜೀವನ ಸುಖವಾಗಿ ಇರುತ್ತದೆ. ವಾರದ ಮಧ್ಯ ಭಾಗದಲ್ಲಿ ಪ್ರೇಮಿಗಳಿಗೆ ಪ್ರೇಮ ನಿವೇದನೆ ಮಾಡಿಕೊಳ್ಳುವ ಸಾಧ್ಯತೆ ಹೆಚ್ಚಾಗಿದೆ. ಶುಭದಿನ 08. ಚಂಡಿ ಪಾರಾಯಣ ಮಾಡಿರಿ.